## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 455 (420) |
| ಮಾನ್ಯ ಸದಸ್ಯರ ಹೆಸರು | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 09.03.2020 |
| ಉತ್ತರಿಸುವ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಜಿಲ್ಲೆಯಲ್ಲಿ ಒಟ್ಟು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು / ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು) | ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 10 ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕುವಾರು ಮಾಹಿತಿ ಈ ಕೆಳಕಂಡಂತಿದೆ:-<br>1. ಅಂಕೋಲಾ,<br>2. ಭಟ್ಕಳ,<br>3. ಹಳಿಯಾಳ,<br>4. ಹೊನ್ನಾವರ,<br>5. ಕುಮುಟಾ,<br>6. ಮುಂಡಗೋಡ,<br>7. ಸಿದ್ದಾಪುರ,<br>8. ಶಿರಸಿ,<br>9. ಜೋಯಿಡಾ,<br>10. ಯಲ್ಲಾಪುರ |
| ಆ | ಸರ್ಕಾರಿ ಆಸ್ಪತ್ರೆಗಳಲ್ಲಿ ಅಥವಾ ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಕೆಲಸ ಮಾಡಲು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಅವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಂಡಿದೆ. | ಬಂದಿದೆ<br>ಸರ್ಕಾರಿ ಸೇವೆಗೆ ನೇಮಕಾತಿ ಹೊಂದಿದ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕಡ್ಡಾಯವಾಗಿ 6 ವರ್ಷ ಗ್ರಾಮೀಣ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಬೇಕು. ತಪ್ಪಿದ್ದಲ್ಲಿ ಅವರ ವಿರುದ್ಧ ಸಕ್ಷಮ ಪ್ರಾಧಿಕಾರವಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರಿಂದ ಕೆ.ಸಿ.ಎಸ್ (ಸಿ.ಸಿ.ಎ) ನಿಯಮದ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ. |

Scanned with CamScanner

| | | |
|---|---|---|
| ಇ | ಕೆಲವೊಂದು ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳು ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಬಂದಿದೆ<br>ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳು ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳ ಬಗ್ಗೆ ಸಂಬಂಧಪಟ್ಟ ನಿಯಂತ್ರಣಾಧಿಕಾರಿಗಳು ಕೆ.ಸಿ.ಎಸ್ (ಸಿ.ಸಿ.ಎ) ನಿಯಮದ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ. |
| ಈ | ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ನಿರ್ಲಕ್ಷ್ಯ ತೋರಿಸುತ್ತಿರುವುದರಿಂದ ಅಲ್ಲಿನ ನರ್ಸ್‌ಗಳೇ ವೈದ್ಯರಂತೆ ಚಿಕಿತ್ಸೆ ನೀಡುತ್ತಿದ್ದು, ಇದರಿಂದಾಗಿ ರೋಗಿಗಳ ಮೇಲೆ ಅಡ್ಡಪರಿಣಾಮಗಳು ಬೀರುವ ಸಾಧ್ಯತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಈ ರೀತಿಯ ದೂರುಗಳು ಬಂದಿರುವುದಿಲ್ಲ |

ಸಂ: ಆಕುಕ 04 ಹೆಚ್ ಎಸ್ ಡಿ 2020

[ಬಿ. ಶ್ರೀರಾಮುಲು]
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

Scanned with CamScanner